ದಿನಾಂಕ:13/12/2018 ರಂದು ಗುರುವಾರ ಬೆಳಿಗ್ಗೆ 2:30 ಗಂಟೆಗೆ ನಾಗಮಂಗಲ ತಾಲ್ಲೂಕಿನ ಬೆಳ್ಳೂರು ಉಪ ವಿಭಾಗ ಕಛೇರಿ ಆವರಣದಲ್ಲಿ ನಡೆದ ಜನಸಂಪರ್ಕ ಸಭೆಯ ನಡಾವಳಿಗಳು.

**ಹಾಜರಿದ್ದ ಅಧಿಕಾರಿಗಳು / ನೌಕರರು.**

ಶ್ರೀ/ಶ್ರೀಮತಿ/ಕುಮಾರಿ:

1) ಶ್ರೀನಿವಾಸಮೂರ್ತಿ : ಅಧೀಕ್ಷಕ ಇಂಜಿನಿಯರ್(ವಿ), ಮಂಡ್ಯ ವೃತ್ತ, ಮಂಡ್ಯ
2) ನಾರಾಯಣ ಕಳ್ಳಿಮನಿ : ಕಾರ್ಯನಿರ್ವಾಹಕ ಇಂಜಿನಿಯರ್(ವಿ), ನಾಗಮಂಗಲ ವಿಭಾಗ
3) ಜಗದೀಶ್ : ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೆಳ್ಳೂರು ಉಪವಿಭಾಗ
4) ಜಿ. ರಾಮಚಂದ್ರ : ಲೆಕ್ಕಾಧಿಕಾರಿ, ನಾಗಮಂಗಲ ವಿಭಾಗ
5) ರವಿಕುಮಾರ್ : ಸಹಾಯಕ ಇಂಜಿನಿಯರ್(ವಿ), ಬೆಳ್ಳೂರು ಉಪವಿಭಾಗ
6) ನಂದಕುಮಾರ್ : ಕಿರಿಯ ಇಂಜಿನಿಯರ್(ವಿ), ಬಿಂಡಿಗನವಿಲೆ ಶಾಖೆ
7) ನವೀನ್ ಕುಮಾರ್ : ಕಿರಿಯ ಇಂಜಿನಿಯರ್(ವಿ), ಕದಬಹಳ್ಳಿ ಶಾಖೆ

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ಉಪವಿಭಾಗ ಬೆಳ್ಳೂರು ರವರು ಸಭೆಗೆ ಹಾಜರಿದ್ದ ಎಲ್ಲಾ ಅಧಿಕಾರಿ/ನೌಕರರನ್ನು ಹಾಗೂ ವಿದ್ಯುತ್ ಗ್ರಾಹಕರನ್ನು ಸ್ವಾಗತಿಸಿದರು.

ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ಆಲಿಸಿ ಬಗೆಹರಿಸುವ ನಿಟ್ಟಿನಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಜನ ಸಂಪರ್ಕ ಸಭೆಯನ್ನು ನಡೆಸುವಂತೆ ಕೆ.ಇ.ಆರ್.ಸಿ ರವರಿಂದ ಆದೇಶವಾಗಿರುತ್ತದೆ. ವಿದ್ಯುತ್ ದರವನ್ನು ಪರಿಷ್ಕರಿಸುವ ಸಂದರ್ಭದಲ್ಲಿ ವಿದ್ಯುತ್ ಬಳಕೆದಾರರ ಒಪ್ಪಿಗೆಯ ಅವಶ್ಯಕತೆ ಇರುತ್ತದೆ. ಶಾಖಾಧಿಕಾರಿಗಳು ವಿದ್ಯುತ್ ಬಳಕೆದಾರರ ಸಮಸ್ಯೆಗಳಿಗೆ ಸ್ಪಂದಿಸುವ ಕುರಿತು ಹಾಗೂ ಗ್ರಾಹಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಸೆಸ್ಕ್ ಕಾರ್ಯ ಮತ್ತು ಪಾಲನಾ ವೃತ್ತ, ಮಂಡ್ಯ ರವರು ವಿದ್ಯುತ್ ಸಂಬಂಧಿತ ದೂರುಗಳನ್ನು ಮೌಖಿಕವಾಗಿ/ಲಿಖಿತವಾಗಿ ಸಲ್ಲಿಸುವಂತೆ ವಿದ್ಯುತ್ ಗ್ರಾಹಕರಲ್ಲಿ / ಸಾರ್ವಜನಿಕರಲ್ಲಿ ಕೇಳಲಾಯಿತು.

ಈ ಹಿಂದಿನ ಸಭೆಗಳಲ್ಲಿ ಚರ್ಚಿಸಲಾದ/ ನೀಡಲಾದ ದೂರು ಅಥವಾ ಸಮಸ್ಯೆಗಳ ಬಗ್ಗೆ ಹಾಗೂ ಅವುಗಳನ್ನು ಬಗೆಹರಿಸಲು ಕೈಗೊಂಡ ಕ್ರಮದ ಬಗ್ಗೆ ಸಹಾಯಕಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೆಳ್ಳೂರು ರವರೊಂದಿಗೆ ಚರ್ಚಿಸಿ ಪರಿಶೀಲಿಸಿದರು.

1) **<u>ಲಕ್ಷ್ಮಣ, ಕಾಳಿಂಗನಹಳ್ಳಿ ಬೆಳ್ಳೂರು ಮೊಬೈಲ್ ನಂ:-9141346793</u>**

ದೂರು:- 63ಕೆವಿಎ (ಕುಡಿಯುವ ನೀರು ಸರಬರಾಜು) ಪರಿರ್ವಕವು ಪದೇ ಪದೇ ಸುಡುತ್ತಿರುವ ಬಗ್ಗೆ ದೂರು ನೀಡಿದರು.

ಕ್ರಮ:- ಕುಡಿಯುವ ನೀರಿನ Supply ಗೆ ತಕ್ಷಣ ಅಂದಾಜುಪಟ್ಟಿ ತಯಾರಿಸಬೇಕೆಂದು ಸಂಬಂಧಪಟ್ಟ ಶಾಖಾಧಿಕಾರಿಗಳಿಗೆ ಸೂಚಿಸಿ, ಸ್ಥಳಕ್ಕೆ ತಾತ್ಕಾಲಿಕವಾಗಿ 63ಕೆವಿಎ ಪರಿವರ್ತಕವನ್ನು Replace ಮಾಡಿ ಮತ್ತು ಅಕ್ರಮ ವಿದ್ಯುತ್ ಸಂಪರ್ಕಪಡೆದಿರುವ ರೈತರ ಮನವೊಲಿಸಿ ಹಣ ಪಾವತಿಸಿ ಸಕ್ರಮೀಕರಣಗೊಳಿಸಿ ಹೆಚ್ಚುವರಿ ಪರಿವರ್ತಕ ಅಳವಡಿಸುವಂತೆ ಸೂಚಿಸಿದರು. ಇಲ್ಲದೇ ಹೋದಲ್ಲಿ ನಿಗಮದ ಸಿಬ್ಬಂದಿಯ ವತಿಯಿಂದ ಅಕ್ರಮ ಪಂಪ್‌ಸೆಟ್ ಸ್ಥಾವರಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸುವಂತೆ ಸೂಚಿಸಿದರು.

ದೂರು:- ಎಸ್.ಸಿ ಕಾಲೋನಿಯಲ್ಲಿ ವೋಲ್ಟೇಜ್ ಕಡಿಮೆ ಇರುವ ಬಗ್ಗೆ

ಕ್ರಮ:- ಸದರಿ ವಿಷಯದ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ, SCP ಯೋಜನೆಯಲ್ಲಿ ಹೆಚ್ಚುವರಿ ಪರಿವರ್ತಕ ಅಳವಡಿಸಲು ಕ್ರಮ ಕೈಗೊಳ್ಳುವಂತೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ) /ಶಾಖಾಧಿಕರಿಗಳಿಗೆ ಸೂಚನೆ ನೀಡಿದರು ~~ನಿಗಮದ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.~~

ಮೇಲ್ಕಂಡ ದೂರುಗಳಿಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ಅನುಪಾಲನಾ ವರದಿಯನ್ನು ಮುಂದಿನ ಜನಸಂಪರ್ಕ ಸಭೆಯಲ್ಲಿ ಹಾಜರುಪಡಿಸುವಂತೆ ಉಪವಿಭಾಗಾಧಿಕಾರಿಗಳಿಗೆ ಸೂಚಿಸಲಾಯಿತು.

ಹಿರಿಯ ಸಹಾಯಕರು ಬೆಳ್ಳೂರು ಉಪವಿಭಾಗರವರು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿಗಳು/ನೌಕರರು ಹಾಗೂ ಗ್ರಾಹಕರುಗಳಿಗೆ ವಂದನಾರ್ಪಣೆ ಸಲ್ಲಿಸಿದ ನಂತರ ಸಭೆಯನ್ನು ಮಧ್ಯಾಹ್ನ 04:00 ಗಂಟೆಗೆ ಮುಕ್ತಾಯಗೊಳಿಸಲಾಯಿತು.

ದೂರನ್ನು ನೀಡಿದ ಗ್ರಾಹಕರ ಸಂಖ್ಯೆ :- 1
ಒಟ್ಟು ದೂರು/ಸಮಸ್ಯೆಗಳು :-2
ಒಟ್ಟು ಹಾಜರಿದ್ದ ಗ್ರಾಹಕರ ಸಂಖ್ಯೆ:-15

ಮೆಮೊ ಸಂಖ್ಯೆ:ಕಾನಿಇಂ(ವಿ)/ಸಇಂ(ತಾ)/ನಾ/18-19/ ದಿನಾಂಕ:

ಕಾರ್ಯನಿರ್ವಾಹಕ ಇಂಜಿನಿಯರ್(ವಿ),
ಚಾ.ವಿ.ಸ.ನಿ.ನಿ, ಕಾ ಮತ್ತು ಪಾ ವಿಭಾಗ,
ನಾಗಮಂಗಲ.

<u>ಪ್ರತಿಯನ್ನು ಇವರ ದಯಾಪರ ಅವಗಾಹನೆಗಾಗಿ ಸಲ್ಲಿಸಲಾಗಿದೆ.</u>

1. ಮುಖ್ಯ ಇಂಜಿನಿಯರ್(ವಿ), ಸೆಸ್ಕ್, ಕಾರ್ಯ ಮತ್ತು ಪಾಲನಾ ವಲಯ ಮೈಸೂರು.
2. ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಸೆಸ್ಕ್, ನಿಗಮ ಕಾರ್ಯಾಲಯ ಮೈಸೂರು.
3. ಅಧೀಕ್ಷಕ ಇಂಜಿನಿಯರ್(ವಿ), ಸೆಸ್ಕ್, ಕಾರ್ಯ ಮತ್ತು ಪಾಲನಾ ವೃತ್ತ ಮಂಡ್ಯ.